**ಪಿ.ಡಬ್ಲೂ.1**

ದಿನಾಂಕಃ 24.05.2023 ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಹೆಚ್.ಪಿ.ಎಲ್. ವಕೀಲರಿಂದ

ನಾನು ಈ ದಾವೆಯ ವಾದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿ ಹೇಳಿರುವ ಅಂಶಗಳನ್ನು ನಾನೇ ಹೇಳಿ ಬರೆಯಿಸಿದ್ದೇನೆ ಹಾಗೂ ಅವು ಸತ್ಯವಾಗಿರುತ್ತವೆಂದು ಪ್ರಮಾಣೀಕರಿಸುತ್ತೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸ.ನಂ,53/5 ರ ಗಣಕೀಕೃತ ಪಹಣಿಯನ್ನು ನಿಪಿ-1 ಎಂದು, ದಿಃ05-03-2021 ರ ಪ್ರತಿವಾದಿಗೆ ಕಳುಹಿಸಿರುವ ತಿಳುವಳಿಕೆ ನೋಟೀಸನ್ನು ನಿಪಿ-2 ಎಂದು, ಪ್ರತಿವಾದಿಗೆ ತಿಳುವಳಿಕೆ ಪತ್ರವನ್ನು ಅಂಚೆ ಮುಖೇನ ಕಳುಹಿಸಿದ ಬಗ್ಗೆ ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ದಿಃ08-02-2021 ರ ನೊಂದಾಯಿತವಲ್ಲದ ಕರಾರು ಪತ್ರವನ್ನ ಹಾಜರುಪಡಿಸಿದ್ದು, ಅದು ದಂಡ ಮತ್ತು ಶುಲ್ಕವನ್ನು ಪಾವತಿಸುವುದಾಗಿ ವಾದಿ ಪರ ವಕೀಲರು ಹೇಳಿದ್ದರಿಂದ, ಸದರಿ ಕರಾರು ಪತ್ರವನ್ನು ಮುಟ್ಟುಗೋಲು ಹಾಕಿಕೊಳ್ಳಲಾಯಿತು.

**(ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯವನ್ನು ಕೋರಿದ್ದು ಸಮಯವನ್ನು ನೀಡಲಾಯಿತು.)**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ,
ನ್ಯಾಯಾಧೀಶರು, ಹುಣಸೂರು.